**ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀಮತಿ ಬಲ್ಕೀಸ್ ಬಾನು ಇವರ 72ರ ನಿಯಮದ ಮೇರೆಗೆ ನೀಡಿರುವ ಸೂಚನೆಗೆ ಮಾನ್ಯ ಕಂದಾಯ ಸಚಿವರ ಹೇಳಿಕೆ.**

**ವಿಷಯ:** ದಿನಾಂಕ:18-11-2025ರ ವಿಜಯವಾಣಿ ಪತ್ರಿಕೆಯಲ್ಲಿ ಗ್ರಾಮ ಲೆಕ್ಕಿಗರ ಟಿಕ್ಕಾಣಿ ಎಂಬ ಶೀರ್ಷಿಕೆಯಡಿಯಲ್ಲಿ ಪ್ರಕಟವಾದ ಗ್ರಾಮ ಆಡಳಿತ ಅಧಿಕಾರಿ (ವಿಲೇಜ್ ಅಕೌಂಟೆಂಟ್) ಗಳು ಹಳ್ಳಿಗಳಿಗೆ ಭೇಟಿ ನೀಡದೇ ಇರುವುದರಿಂದ ಜನ ಸಾಮಾನ್ಯರಿಗೆ ತೊಂದರೆಯಾಗುತ್ತಿದ್ದು, ಗ್ರಾಮ ಆಡಳಿತ ಅಧಿಕಾರಿಗಳಿಗೆ ಸೂಕ್ತ ಕ್ರಮ ಕೈಗೊಂಡು ಕರ್ತವ್ಯ ನಿರ್ವಹಿಸಲು ಸೂಚಿಸುವ ವಿಷಯದ ಬಗ್ಗೆ.

** ** **

**ಹೇಳಿಕೆ**

ಸಾರ್ವಜನಿಕರು/ರೈತರ ಕೆಲಸ ಕಾರ್ಯಗಳು ವಿಳಂಬವಾಗುವುದನ್ನು ತಡೆಗಟ್ಟುವ ಸಲುವಾಗಿ ಕರ್ನಾಟಕ ಭೂ-ಕಂದಾಯ ಅಧಿನಿಯಮ 1964ರ ಕಲಂ 2(5)ರ ಪ್ರಕರಣದಲ್ಲಿ ಅಗತ್ಯಪಡಿಸಲಾದಂತೆ ಶಿವಮೊಗ್ಗ ಜಿಲ್ಲೆಯಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಗ್ರಾಮ ಆಡಳಿತ ಅಧಿಕಾರಿಗಳಿಗೆ ಗ್ರಾಮ ಪಂಚಾಯಿತಿ ಕಟ್ಟಡ/ನಾಡಕಛೇರಿ ಹಾಗೂ ಇತರೆ ಸರ್ಕಾರಿ ಕಟ್ಟಡಗಳಲ್ಲಿ ಕಛೇರಿ ಸ್ಥಳಗಳನ್ನು ನಿಗದಿಪಡಿಸಿ ಜಿಲ್ಲಾಧಿಕಾರಿ, ಶಿವಮೊಗ್ಗ ಜಿಲ್ಲೆ ಇವರು ದಿನಾಂಕ:21.07.2025ರಂದು ಅಧಿಸೂಚನೆಯನ್ನು ಹೊರಡಿಸಿರುತ್ತಾರೆ ಹಾಗೂ ಗ್ರಾಮ ಆಡಳಿತ ಅಧಿಕಾರಿಗಳು ಅವರಿಗೆ ನಿಗದಿಪಡಿಸಿರುವ ಕಛೇರಿ ಸ್ಥಳಗಳಲ್ಲಿ ಹಾಜರಿದ್ದು ಸಾರ್ವಜನಿಕರ ಮತ್ತು ಸರ್ಕಾರದ ದೈನಂದಿನ ಕರ್ತವ್ಯವನ್ನು ನಿರ್ವಹಿಸಲು ಸೂಚಿಸಲಾಗಿರುತ್ತದೆ. ಇದೇ ಮಾದರಿಯಲ್ಲಿ ಎಲ್ಲಾ ಜಿಲ್ಲೆಗಳ ಜಿಲ್ಲಾಧಿಕಾರಿಗಳು ಗ್ರಾಮ ಆಡಳಿತ ಅಧಿಕಾರಿಗಳಿಗೆ ಗ್ರಾಮ ಪಂಚಾಯಿತಿ ಕಟ್ಟಡ/ ನಾಡಕಛೇರಿ ಹಾಗೂ ಇತರೆ ಸರ್ಕಾರಿ ಕಟ್ಟಡಗಳಲ್ಲಿ ಕಛೇರಿ ಸ್ಥಳಗಳನ್ನು ನಿಗದಿಪಡಿಸಿ ಅಧಿಸೂಚನೆಯನ್ನು ಹೊರಡಿಸಲಾಗಿರುತ್ತದೆ.

ಮುಂದುವರೆದು, ಗ್ರಾಮ ಆಡಳಿತ ಅಧಿಕಾರಿಗಳು ಅವರ ವೃತ್ತದಲ್ಲಿನ ಗ್ರಾಮಗಳಿಗೆ ನಿಯಮಿತವಾಗಿ ಭೇಟಿ ನೀಡಿ ಸಾರ್ವಜನಿಕರ/ರೈತರ ಸಮಸ್ಯೆಗಳನ್ನು ವಿಳಂಬಕ್ಕೆ ಆಸ್ಪದ ನೀಡದೇ ತ್ವರಿತವಾಗಿ ಇತ್ಯರ್ಥಪಡಿಸುವಂತೆ ಇಲಾಖೆಯ ಪ್ರಗತಿ ಪರಿಶೀಲನಾ ಸಭೆಗಳಲ್ಲಿ ಕಾಲಕಾಲಕ್ಕೆ ಸೂಕ್ತ ನಿರ್ದೇಶನಗಳನ್ನು ನೀಡಲಾಗಿರುತ್ತದೆ.

ಕಂಇ 219 ಬಿಎಸ್‌ಸಿ 2025

**(ಕೃಷ್ಣ ಬೈರೇಗೌಡ)**
ಕಂದಾಯ ಸಚಿವರು